ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1545
ವಿಧಾನ ಪರಿಷತ್ ಸದಸ್ಯರ ಹೆಸರು	:	ಶ್ರೀ ಕೆ.ಎ ತಿಪ್ಪೇಸ್ವಾಮಿ
ಉತ್ತರಿಸುವ ದಿನಾಂಕ	:	11-03-2022
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗದವರಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಹೊಂದಲು ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆ ಜಾರಿಯಲ್ಲಿದೆಯೇ; (ಹಾಗಿದ್ದಲ್ಲಿ, ವಿವರ ನೀಡುವುದು)	ಸಮಾಜ ಕಲ್ಯಾಣ ಇಲಾಖೆಯವತಿಯಿಂದ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್-ಸಿ / ಬ್ಯಾಂಕಿಂಗ್ / ಆರ್.ಆರ್.ಬಿ ಮತ್ತು ಎಸ್.ಎಸ್.ಸಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿ ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಸಲಾಗುತ್ತಿದ್ದು, ಸದರಿ ಕಾರ್ಯಕ್ರಮಕ್ಕೆ ಪ್ರತಿ ವರ್ಷ ರಾಜ್ಯ ವಲಯದಡಿ ಮಾತ್ರ ಅನುದಾನ ಒದಗಿಸಲಾಗುತ್ತಿದೆ. ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನ ಒದಗಿಸಲಾಗುತ್ತಿಲ್ಲ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯವತಿಯಿಂದ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಹೊಂದಲು ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆ ಜಾರಿಯಲ್ಲಿರುವುದಿಲ್ಲ.
ಆ)	ಈ ಯೋಜನೆ ಅಡಿ ಕಳೆದ 3 ವರ್ಷಧಲ್ಲಿ ಮೇಲಿನ ವರ್ಗದ ಅಭ್ಯರ್ಥಿಗಳು ತರಬೇತಿ ಪಡೆದು ಉತ್ತೀರ್ಣಗೊಂಡವರ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು)	ಕೇಂದ್ರ ಪುರಷ್ಕೃತ ಯೋಜನೆಯ ಅನುದಾನದಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಕಾರ್ಯಕ್ರಮ ರಾಜ್ಯದಲ್ಲಿ ಅನುಷ್ಠಾನಗೊಳಸುತ್ತಿಲ್ಲ.
ಇ)	ಈ ಯೋಜನೆ ಅಡಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ಕಳೆದ ಮೂರು ವರ್ಷಗಳಲ್ಲಿ ನೀಡಿರುವ ಅನುದಾನ ಮತ್ತು ಬಳಕೆ ಎಷ್ಟು? (ವಿವರಗಳನ್ನು ನೀಡುವುದು)	ಕೇಂದ್ರ ಸರ್ಕಾರದಿಂದ ಸದರಿ ಯೋಜನೆಗಳಿಗೆ ಯಾವುದೇ ಅನುದಾನ ಒದಗಿಸಿರುವುದಿಲ್ಲ.

ಸಕಇ 208 ಪಕವಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.